# All India Radio: Bangalore
# National Bulletin In Kannada
# 20.06.2026  19.35 hrs

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

೧. ರಾಷ್ಟ್ರಪತಿ ದ್ರೌಪದಿ ಮುರ್ಮು ಹಾಗೂ ಪ್ರಧಾನಿ ನರೇಂದ್ರ ಮೋದಿ ಅವರಿಂದ ಒಡಿಶಾದಲ್ಲಿ ೪೭ ಸಾವಿರ ಕೋಟಿ ರೂಪಾಯಿಗೂ ಅಧಿಕ ಮೊತ್ತದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ

೨. ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ನಿಧಿಯಡಿ ೯ ಕೋಟಿ ೪೪ ಲಕ್ಷ ರೈತರ ಬ್ಯಾಂಕ್ ಖಾತೆಗೆ ಹಣ ವರ್ಗಾವಣೆ

೩. ನಾಳೆ ಅಂತಾರಾಷ್ಟ್ರೀಯ ಯೋಗ ದಿನ; ಪ್ರಧಾನಿ ನರೇಂದ್ರ ಮೋದಿ ನೇತೃತ್ವದಲ್ಲಿ ಕೋಲ್ಕತ್ತಾದಲ್ಲಿ ಪ್ರಧಾನ ಕಾರ್ಯಕ್ರಮ

೪. ನೀಟ್-ಯುಜಿ; ಪಾರದರ್ಶಕ, ಬಿಗಿಬಂದೋಬಸ್ತ್‌ನಲ್ಲಿ ನಾಳೆ ಮರುಪರೀಕ್ಷೆ

೫. ಅಂತಾರಾಷ್ಟ್ರೀಯ ಏಕದಿನ ಕ್ರಿಕೆಟ್ ಸರಣಿ; ಅಫ್ಘಾನ್ ನೀಡಿದ ೨೧೯ ರನ್ ಗಳ ಗುರಿ ಬೆನ್ನತ್ತಿದ ಭಾರತ ಸುಸ್ಥಿತಿಯಲ್ಲಿ

<>><><*><><<>

ರಾಷ್ಟ್ರಪತಿ ದ್ರೌಪದಿ ಮುರ್ಮು ಮತ್ತು ಪ್ರಧಾನಿ ನರೇಂದ್ರ ಮೋದಿ, ಒಡಿಶಾದಲ್ಲಿ ಇಂದು ೪೭ ಸಾವಿರದ ೬೦೦ ಕೋಟಿ ರೂಪಾಯಿಗೂ ಅಧಿಕ ಮೊತ್ತದ ವಿವಿಧ ಅಭಿವೃದ್ಧಿ ಯೋಜನೆಗಳ ಉದ್ಘಾಟನೆ ಹಾಗೂ ಶಂಕುಸ್ಥಾಪನೆ ನೆರವೇರಿಸಿದರು. ಇಂಧನ, ಸಾರಿಗೆ, ಔದ್ಯಮಿಕ ಮೂಲಸೌಕರ್ಯ, ಆರೋಗ್ಯ, ಶಿಕ್ಷಣ, ಕುಡಿಯುವ ನೀರು ಹಾಗೂ ನೀರಾವರಿ ಯೋಜನೆಗಳು ಇವುಗಳಲ್ಲಿ ಸೇರಿವೆ. ಮೋಹನ್ ಚರಣ್ ಮಾಜಿ ನೇತೃತ್ವದ ಒಡಿಶಾ ಸರ್ಕಾರದ ಎರಡು ವರ್ಷಗಳ ಅಧಿಕಾರವಧಿ ಆಚರಣೆಗಾಗಿ ಈ ಕಾರ್ಯಕ್ರಮ ಆಯೋಜಿತವಾಗಿತ್ತು. ಸಮಾರಂಭದಲ್ಲಿ ಮಾತನಾಡಿದ ರಾಷ್ಟ್ರಪತಿ ದ್ರೌಪದಿ ಮುರ್ಮು, ದೇಶ ಮುನ್ನಡೆಸುವಲ್ಲಿ ಪ್ರಧಾನಿ ನರೇಂದ್ರ ಮೋದಿ ನೇತೃತ್ವವನ್ನು ಶ್ಲಾಘಿಸಿದರು. ಪ್ರಧಾನಿ ಜಾಗತಿಕ ವೇದಿಕೆಗಳಲ್ಲಿ ಭಾರತ ಪ್ರತಿಷ್ಠೆ ಹಾಗೂ ಪ್ರಭಾವವನ್ನು ಗಣನೀಯವಾಗಿ ಹೆಚ್ಚಿಸಿದ್ದಾರೆ ಎಂದು ಅವರು ಹೇಳಿದರು. ಇದಕ್ಕೂ ಮುನ್ನ ತಮ್ಮ ೬೮ನೇ ಜನ್ಮದಿನವನ್ನು ಆಚರಿಸಿಕೊಳ್ಳುತ್ತಿರುವ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರ ಹುಟ್ಟೂರು ಪಹಾಡ್‌ಪುರಕ್ಕೆ ಭೇಟಿ ನೀಡಿದ ಪ್ರಧಾನಿಯವರು ಸಂಭ್ರಮಾಚರಣೆಯಲ್ಲಿ ಪಾಲ್ಗೊಂಡರು.

ರಾಷ್ಟ್ರಪತಿ ಹಾಗೂ ಪ್ರಧಾನಿ ಪಹಾಡ್‌ಪುರದಲ್ಲಿ ಸಂತಾಲಿ ಜೆಹೇರಾ, ಗೋಶಾನಿಪೀಠ ಹಾಗೂ, ಹೋಜೆಹೆರಾ ಪವಿತ್ರ ತಾಣಗಳಲ್ಲಿ ಪ್ರಾರ್ಥನೆ ಸಲ್ಲಿಸಿದರು. ಈ ಸಂದರ್ಭದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಸ್ಥಳೀಯ ಬುಡಕಟ್ಟು ಸಮುದಾಯದವರೊಂದಿಗೆ ಸಂವಾದ ನಡೆಸಿದರು.

<>><><*><><<>

ಪಶ್ಚಿಮ ಬಂಗಾಳ ಪ್ರವಾಸದಲ್ಲಿರುವ ಪ್ರಧಾನಿ ನರೇಂದ್ರ ಮೋದಿ ಅವರು, ಹೂಗ್ಲಿ ಜಿಲ್ಲೆಯ ತಾರಕೇಶ್ವರದಲ್ಲಿಂದು ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ನಿಧಿಯ ೨೩ ನೇ ಕಂತನ್ನು ಬಿಡುಗಡೆ ಮಾಡಿದರು. ದೇಶಾದ್ಯಂತ ಸುಮಾರು ೯ ಕೋಟಿ ೪೪ ಲಕ್ಷ ರೈತರ ಬ್ಯಾಂಕ್ ಖಾತೆಗಳಿಗೆ ೧೮ ಸಾವಿರದ ೮೮೦ ಕೋಟಿ ರೂಪಾಯಿಗೂ ಅಧಿಕ ಹಣ ವರ್ಗಾವಣೆ ಮಾಡುವ ಉಪಕ್ರಮ ಇದಾಗಿದೆ.

ಪ್ರಧಾನಿ ನರೇಂದ್ರ ಮೋದಿ ಅವರು, ಇದೇ ಸಂದರ್ಭದಲ್ಲಿ ಪ್ರಧಾನಮಂತ್ರಿ ಫಸಲ್ ಬಿಮಾ ಯೋಜನೆ, ಅಗ್ರಿಸ್ಟ್ಯಾಕ್, ನೈಸರ್ಗಿಕ ಕೃಷಿಯ ರಾಷ್ಟ್ರೀಯ ಅಭಿಯಾನ, ಪ್ರಧಾನಮಂತ್ರಿ ಧನ್‌ಧಾನ್ಯ ಕೃಷಿ ಯೋಜನಾ ಸೇರಿದಂತೆ ಪ್ರಮುಖ ಕೇಂದ್ರ ಕೃಷಿ ಯೋಜನೆಗಳಿಗೆ ಚಾಲನೆ ನೀಡಿದರು.

<>><><*><><<>

ಪ್ರಧಾನಿ ನರೇಂದ್ರ ಮೋದಿ ಅವರು ಕೊಲ್ಕತ್ತಾದಲ್ಲಿ ನಾಳೆ, ದೇಶೀಯ ನಿರ್ಮಿತ ಮೂರು ಯುದ್ಧನೌಕೆಗಳನ್ನು ಲೋಕಾರ್ಪಣೆಗೊಳಿಸಲಿದ್ದಾರೆ. ಐಎನ್‌ಎಸ್ 'ದುನಗಿರಿ' ನೌಕೆ ಬ್ರಹ್ಮೋಸ್ ಕ್ಷಿಪಣಿಯಿಂದ ಸುಸಜ್ಜಿತವಾಗಿದ್ದು, ಮಧ್ಯಮ ವ್ಯಾಪ್ತಿಯ ವಾಯು ರಕ್ಷಣಾ ವ್ಯವಸ್ಥೆ ಒಳಗೊಂಡಿದೆ. ಐಎನ್‌ಎಸ್ 'ಸಂಶೋಧಕ್' ನೌಕೆಯನ್ನು ಕರಾವಳಿಯ ಆಳ ನೀರಿನ ಜಲನಕ್ಷೆ ಕಾರ್ಯಾಚರಣೆಗೆ ಅನುಕೂಲವಾಗುವಂತೆ ರೂಪಿಸಲಾಗಿದೆ. ಐಎನ್‌ಎಸ್ 'ಅಗ್ರೇಯ' ನೌಕೆ, ಸಬ್‌ಮೆರಿನ್ ನಿರೋಧಕವಾಗಿದ್ದು, ಕರಾವಳಿ ರಕ್ಷಣೆಗೆ ರಾಕೆಟ್ ಲಾಂಚರ್‌ಗಳನ್ನು ಹೊಂದಿದೆ. ಈ ನೌಕೆಗಳಿಗೆ ಬೇಕಾದ ಶೇಕಡಾ ೭೫ಕ್ಕೂ ಅಧಿಕ ಪ್ರಮಾಣದ ಉಪಕರಣಗಳನ್ನು ೨೦೦ ಕ್ಕೂ ಅಧಿಕ ಅತಿ ಸಣ್ಣ, ಸಣ್ಣ ಹಾಗೂ ಮಧ್ಯಮ ಗಾತ್ರದ ಉದ್ದಿಮೆಗಳಿಂದ ಪಡೆದು, ನಿರ್ಮಿಸಿರುವುದು ವಿಶೇಷವೆನಿಸಿದೆ.

<>><><*><><<>

ದೇಶದ ಸಾಂಸ್ಕೃತಿಕ ಪರಂಪರೆಯನ್ನು ಸಂರಕ್ಷಿಸಲು ಸರ್ಕಾರ ಬದ್ಧವಾಗಿದೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಹೇಳಿದ್ದಾರೆ. ಕೊಲ್ಹಾಪುರದಲ್ಲಿಂದು ಒಂದು ಸಾವಿರದ ೪೪೫ ಕೋಟಿ ರೂಪಾಯಿ ವೆಚ್ಚದಲ್ಲಿ ಕೈಗೊಳ್ಳಲಾಗಿರುವ ಶ್ರೀ ಅಂಬಾಬಾಯಿ ದೇವಸ್ಥಾನ ಅಭಿವೃದ್ಧಿ ಯೋಜನೆ ಉದ್ಘಾಟಿಸಿ ಅವರು ಮಾತನಾಡಿದರು. ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಕಳೆದ ಹನ್ನೆರಡು ವರ್ಷಗಳಲ್ಲಿ ಸಾಂಸ್ಕೃತಿ ಪುನರುತ್ಥಾನಕ್ಕಾಗಿ ವ್ಯಾಪಕ ಯೋಜನೆಗಳನ್ನು ಕೈಗೊಂಡಿದೆ. ಐತಿಹಾಸಿಕ ಕರವೀರ ನಗರದಲ್ಲಿ ಇರುವ ಶ್ರೀ ಅಂಬಾಬಾಯಿ ದೇವಸ್ಥಾನ, ಶ್ರದ್ಧಾಳುಗಳ ಪ್ರಮುಖ ಕೇಂದ್ರವಾಗಿದ್ದು, ಯಾತ್ರಿಕರಿಗೆ ಅಭಿವೃದ್ಧಿ ಯೋಜನೆಯಿಂದ ಅನುಕೂಲವಾಗಲಿದೆ ಎಂದರು.

<>><><*><><<>

ಕೇಂದ್ರ ಸರ್ಕಾರ, ೧೬-ಎಫ್‌ಡಿಸಿ ಔಷಧಗಳ ತಯಾರಿಕೆ, ಮಾರಾಟ ಹಾಗೂ ವಿತರಣೆಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ನಿಷೇಧಿಸಿದೆ. ಸುಪ್ರೀಂಕೋರ್ಟ್ ನಿರ್ದೇಶನದ ಮೇರೆಗೆ ಔಷಧ ತಾಂತ್ರಿಕ ಸಲಹಾ ಮಂಡಳಿ ನೇಮಿಸಿದ್ದ ತಜ್ಞರ ಸಮಿತಿ ಈ ಔಷಧಗಳು, ಆರೋಗ್ಯಕ್ಕೆ ಅಪಾಯ ತರಬಹುದು ಎನ್ನುವ ಅಭಿಪ್ರಾಯದ ಹಿನ್ನೆಲೆಯಲ್ಲಿ ಈ ಕ್ರಮ ಕೈಗೊಳ್ಳಲಾಗಿದೆ. ಈ ಔಷಧಗಳು, ಚರ್ಮ, ನೋವು ನಿವಾರಕ, ರೋಗನಿರೋಧಕ, ಮಾಂಸಖಂಡ ನಿಯಂತ್ರಣಕ್ಕೆ ಸಂಬಂಧಿಸಿವೆ.

<>><><*><><<>

ನಾಳೆ ಅಂತಾರಾಷ್ಟ್ರೀಯ ಯೋಗ ದಿನ. ಎಲ್ಲ ವಯೋಮಾನದವರಿಗೂ ಯೋಗಾಭ್ಯಾಸದ ಪ್ರಾಮುಖ್ಯತೆ ಪ್ರತಿಪಾದಿಸುವ ಆರೋಗ್ಯಕರ ವಯೋವೃದ್ಧಿಗಾಗಿ ಯೋಗ ಎಂಬುದು ೧೨ನೇ ಅಂತಾರಾಷ್ಟ್ರೀಯ ಯೋಗದಿನದ ಘೋಷವಾಕ್ಯವಾಗಿದೆ. ವಿಶ್ವದಾದ್ಯಂತ ೨ ಸಾವಿರದ ೫೦೦ ಕ್ಕೂ ಅಧಿಕ ಸ್ಥಳಗಳಲ್ಲಿ ಯೋಗಾಭ್ಯಾಸಕ್ಕಾಗಿ ವ್ಯವಸ್ಥೆ ಮಾಡಲಾಗಿದೆ. ಪ್ರಧಾನಮಂತ್ರಿ ನೇತೃತ್ವದಲ್ಲಿ ಪಶ್ಚಿಮ ಬಂಗಾಳದ ಕೋಲ್ಕತ್ತಾದಲ್ಲಿ ಪ್ರಧಾನ ಸಮಾರಂಭ ನಡೆಯಲಿದೆ. ಸಂಸ್ಕೃತಿ ಸಚಿವಾಲಯ ದೇಶದ ಪ್ರಮುಖ ನೂರು ತಾಣಗಳಲ್ಲಿ ವಿಶೇಷ ಯೋಗ ಕಾರ್ಯಕ್ರಮಗಳನ್ನು ವ್ಯವಸ್ಥೆ ಮಾಡಲಾಗಿದೆ. ªÀÄಕರ್ನಾಟಕದ ಐತಿಹಾಸಿಕ ತಾಣ ಹಂಪಿ ಆವರಣದಲ್ಲಿ ಹಾಗೂ ಬೆಂಗಳೂರಿನ ವಿಧಾನಸೌಧ ಸೇರಿದಂತೆ ರಾಜ್ಯದ್ಯಂತ ವಿಶೇಷ ಕಾರ್ಯಕ್ರಮ ಆಯೋಜಿಸಲಾಗಿದೆ. ಯೋಗಾಭ್ಯಾಸವನ್ನು ದಿನನಿತ್ಯದ ಚಟುವಟಿಕೆಯಾಗಿ ವೈಯಕ್ತಿಕ ಆಧಾರದ ಮೇಲೆ ಅಳವಡಿಸಿಕೊಳ್ಳುವುದರ ಮೂಲಕ, ಜೀವನ ಶೈಲಿ ಸಂಬಂಧಿತ ಸಮಸ್ಯಗಳನ್ನು ಹಾಗೂ ಚಯಾಪಚಯ ವ್ಯವಸ್ಥೆಗಳನ್ನು ನಿರ್ವಹಿಸಬಹುದಾಗಿದೆ ಎಂದು ಅಖಿಲ ಭಾರತ ಆಯುರ್ವೇದ ಸಂಸ್ಥೆ ನಿರ್ದೇಶಕ ಪ್ರೊಫೆಸರ್ ಪ್ರದೀಪ್ ಕುಮಾರ್ ಪ್ರಜಾಪತಿ ತಿಳಿಸಿದ್ದಾರೆ. ಎಲ್ಲಾ ವಯೋಮಾನದವರನ್ನು ಯೋಗಾಭ್ಯಾಸದತ್ತ ಆಕರ್ಷಿಸಲು ಸರ್ಕಾರ ವಿವಿಧ ಉಪಕ್ರಮಗಳನ್ನು ಕೈಗೊಂಡಿದೆ ಎಂದು ಕೇಂದ್ರದ ಆಯುಷ್ ಸ್ವತಂತ್ರ ಖಾತೆ ರಾಜ್ಯ ಸಚಿವ ಪ್ರತಾಪ್ ರಾವ್ ಜಾದವ್ ತಿಳಿಸಿದ್ದಾರೆ. ಸಾಂಕ್ರಾಮಿಕೇತರ ರೋಗಗಳ ನಿವಾರಣೆಗಾಗಿ ಯೋಗ ಶಿಷ್ಟಾಚಾರಗಳನ್ನು ಆರಂಭಿಸಲಾಗಿದೆ. ವೃತ್ತಿಪರರಿಗಾಗಿ ವೈ-ಬ್ರೇಕ್ ಹೊಸ ಆಪ್‌ಗಳನ್ನು ಬಿಡುಗಡೆ ಮಾಡಲಾಗಿದೆ ಎಂದು ಪ್ರತಾಪ್ ರಾವ್ ಜಾದವ್ ಆಕಾಶವಾಣಿಗೆ ನೀಡಿದ ಸಂದರ್ಶನದಲ್ಲಿ ತಿಳಿಸಿದ್ದಾರೆ.

ಪೂರ್ಣ ಸಂದರ್ಶನ ೧೦೦.೧ ಆಕಾಶವಾಣಿ ಗೋಲ್ಡ್ ವಾಹಿನಿಯಲ್ಲಿ ಇಂದು ರಾತ್ರಿ ೯.೩೦ ಕ್ಕೆ ಪ್ರಸಾರವಾಗಲಿದೆ.

<>><><*><><<>

ನಾಳೆ ನೀಟು-ಯುಜಿ -೨೦೨೬ ಮರುಪರೀಕ್ಷೆ ನಡೆಯಲಿದ್ದು, ರಾಷ್ಟ್ರೀಯ ಪರೀಕ್ಷಾ ಸಂಸ್ಥೆ-ಎನ್‌ಟಿಎ, ಪಾರದರ್ಶಕ ಪರೀಕ್ಷಾ ವ್ಯವಸ್ಥೆಗಾಗಿ ವ್ಯಾಪಕ ಬಂದೋಬಸ್ತ್ ಮಾಡಿದೆ. ಈ ಹಿನ್ನೆಲೆಯಲ್ಲಿ ಇಂದು ಪೂರ್ವಭಾವಿ ಅಭ್ಯಾಸ ನಡೆಸಲಾಯಿತು. ಎರಡೂವರೆ ಲಕ್ಷಕ್ಕೂ ಅಧಿಕ ಭದ್ರತಾ ಸಿಬ್ಬಂದಿಯನ್ನು ಪರೀಕ್ಷಾ ಕೇಂದ್ರಗಳ ಸುವ್ಯವಸ್ಥೆಗಾಗಿ ನಿಯೋಜಿಸಲಾಗುತ್ತಿದೆ. ದೇಶದ ೫೫೧ ನಗರ ಹಾಗೂ ವಿದೇಶಗಳ ೧೪ ನಗರಗಳಲ್ಲಿ ಈ ಪರೀಕ್ಷೆ ನಡೆಸಲಾಗುತ್ತಿದ್ದು, ೨೨ ಲಕ್ಷದ ೭೯ ಸಾವಿರಕ್ಕೂ ಅಧಿಕ ಅಭ್ಯರ್ಥಿಗಳು ಪರೀಕ್ಷೆಗೆ ನೊಂದಾಯಿಸಿಕೊಂಡಿದ್ದಾರೆ. ಪೆನ್ ಅಂಡ್ ಪೇಪರ್ ಮಾದರಿಯಲ್ಲಿ ಆಯೋಜಿಸಲಾಗಿರುವ ಈ ಮರುಪರೀಕ್ಷೆ, ಮಧ್ಯಾಹ್ನ ೨ ರಿಂದ ಸಂಜೆ ೫ ಗಂಟೆ ೧೫ ನಿಮಿಷಗಳವರೆಗೆ ನಡೆಯಲಿದೆ. ನ್ಯಾಯಯುತ ಹಾಗೂ ಪಾರದರ್ಶಕ ಪರೀಕ್ಷಾ ನಿರ್ವಹಣೆಗಾಗಿ, ಸಿಸಿ ಟಿವಿ ಸರ್ವೇಕ್ಷಣೆ, ಆಧಾರ್ ಮೂಲಕ ಬಯೋಮೆಟ್ರಿಕ್ ದೃಡೀಕರಣ, ಪರೀಕ್ಷಾ ಸಾಮಗ್ರಿ ಸಾಗಾಟಕ್ಕೆ ಪೊಲೀಸ್ ಬೆಂಗಾವಲಿನ ಜಿಪಿಎಸ್ ವಾಹನ ಮೊದಲಾದ ಬಹುಹಂತದ ಭದ್ರತಾ ವ್ಯವಸ್ಥೆಯನ್ನು ಮಾಡಲಾಗಿದೆ ಎಂದು ಎನ್‌ಟಿಎ ತಿಳಿಸಿದೆ.

<>><><*><><<>

ಪ್ರತಿಷ್ಠಿತ ಪದ್ಮಶ್ರೀ ಪ್ರಶಸ್ತಿಗೆ ಕರ್ನಾಟಕದ ಐವರು ಸಾಧಕರು ಭಾಜನರಾಗಿದ್ದು, ಇದೇ ಮಂಗಳವಾರ ದೆಹಲಿಯಲ್ಲಿ ನಡೆಯಲಿರುವ ಸಮಾರಂಭದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಪ್ರಶಸ್ತಿ ಪ್ರದಾನ ಮಾಡಲಿದ್ದಾರೆ. ವೈದ್ಯಕೀಯ ಸೇವೆಗಾಗಿ ಡಾ.ಪ್ರಭಾಕರ್ ಕೋರೆ, ಶಿಕ್ಷಣ ತಂತ್ರಜ್ಞ ಶಶಿ ಶೇಖರ್ ವೇಂಪತಿ, ಹಿಮೋಫಿಲಿಯಾ ರೋಗಿಗಳಿಗೆ ಉಚಿತ ಚಿಕಿತ್ಸೆ ಸಿಗುವಂತೆ ಮಾಡಿದ ವೈದ್ಯ ಡಾ.ಸುರೇಶ್ ಹನಗವಾಡಿ, ಉದಾರ ಉದ್ಯಮಿ ಟಿ.ಟಿ.ಜಗನ್ನಾಥನ್, ಭಾರತೀಯ ರಕ್ಷಣಾ ವಲಯವನ್ನು ಸ್ವಾವಲಂಬಿಯಾಗಿಸಿದ ವಿಜ್ಞಾನಿ ಡಾ.ಶುಭಾ ವೆಂಕಟೇಶ್ ಅಯ್ಯಂಗಾರ್ ಅವರಿಗೆ ಪ್ರಶಸ್ತಿ ಪ್ರದಾನ ಮಾಡಲಾಗುವುದು.

<>><><*><><<>

ಚೆನ್ನೈನ ಎಂ.ಎ ಚಿದಂಬರಂ ಕ್ರೀಡಾಂಗಣದಲ್ಲಿ ನಡೆದಿರುವ ಮೂರನೇ ಹಾಗೂ ಅಂತಿಮ ಏಕದಿನ ಕ್ರಿಕೆಟ್ ಪಂದ್ಯದಲ್ಲಿ ಅಫ್ಘಾನಿಸ್ತಾನ ತಂಡ, ಭಾರತಕ್ಕೆ ೨೧೯ ರನ್‌ಗಳ ಗೆಲುವಿನ ಗುರಿ ನೀಡಿದೆ. ಮೊದಲು ಬ್ಯಾಟ್ ಮಾಡಿದ ಅಫ್ಘಾನಿಸ್ತಾನ ೪೪.೨ ಓವರ್‌ಗಳಲ್ಲಿ ೨೧೮ ರನ್‌ಗಳಿಸುವಷ್ಟರಲ್ಲೇ ತನ್ನೆಲ್ಲಾ ವಿಕೆಟ್ ಕಳೆದುಕೊಂಡಿತು. ೨೧೯ ರನ್‌ಗಳ ಗುರಿ ಬೆನ್ನತ್ತಿರುವ ಭಾರತ, ಇತ್ತೀಚಿನ ವರದಿಬಂದಾಗ ೨೭ ಓವರ್‌ಗಳಲ್ಲಿ ೧ ವಿಕೆಟ್ ನಷ್ಟಕ್ಕೆ ೧೮೮ ರನ್ ಮಾಡಿ ಆಡುತ್ತಿದೆ.

<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>

<>><><ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ ><><<>